# 2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ನಂಜನಗೂಡು

**ಸಿ. ಸಿ. ನಂ.1262/2024**

**ಫಿರ್ಯಾದಿ :** ಕೃಷ್ಣರಾಜು ಸಿ ಬಿನ್ ಚಿಕ್ಕಸಿದ್ದಯ್ಯ
45 ವರ್ಷ, ಮನೆ ನಂ 2956, 5 ನೇ ಕ್ರಾಸ್
ಆರ್ ಪಿ ರಸ್ತೆ, ನಂಜನಗೂಡು.

ವಿರುದ್ಧ

**ಆರೋಪಿ :** ಕೆ ಚಂದ್ರಶೇಖರ ಕೇಸ್ ವರ್ಕರ್
48 ವರ್ಷ, ಸರ್ಕಾರಿ ಬಾಲಕಿಯರ ಶಾಲೆ ಗುಂಡ್ಲುಪೇಟೆ ಟೌನ್
ಮಾದಹಳ್ಳಿ ರಸ್ತೆ, ಗುಂಡ್ಲುಪೇಟೆ.

## ಅ. ಪ್ರ. ಸಂ. ಕಲಂ 313ರನ್ವಯ ಆರೋಪಿಯ ಹೇಳಿಕೆ

**ಪ್ರಶ್ನೆ 1ಃ** ನೀವು ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಉತ್ತರ ಃ

**ಪ್ರಶ್ನೆ 2ಃ** ಪ್ರಾಸಾ-1 ಕೃಷ್ಣರಾಜು ಸಿ ಇವರು ತಮ್ಮ ಸಾಕ್ಷ್ಯದಲ್ಲಿ ಹೇಳುವುದೇನೆಂದರೆ, ಆರೋಪಿಯಾದ ನೀವು ಮತ್ತು ಫಿರ್ಯಾದುದಾರರು ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ಆರೋಪಿಯಾದ ನೀವು ನಿಮ್ಮ ಕುಟುಂಬದ ವ್ಯವಹಾರದ ಸಲುವಾಗಿ ಅಂದರೆ ಗೃಹಕೃತ್ಯದ ಖರ್ಚಿಗಾಗಿ ಹಾಗು ಕೈ ಸಾಲ ತೀರಿಸುವ ಸಲುವಾಗಿ ದಿಃ 02.05.2024 ರಂದು ಪ್ರಾಸಾ-1 ರವರಿಂದ ರೂ.4,00,000/- ಗಳನ್ನು ಸಾಲವಾಗಿ ಪಡೆದುಕೊಂಡು, ಸದರಿ ಸಾಲವನ್ನು 3 ತಿಂಗಳ ಒಳಗೆ ಮರುಪಾವತಿ ಮಾಡುವುದಾಗಿ ಒಪ್ಪಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

**ಪ್ರಶ್ನೆ 3** ಪ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು ಆರೋಪಿಯಾದ ನೀವು ಸದರಿ ರೂ 4,00,000/- ಸಾಲದ ಬಾಬ್ತುವಿಗೆ ನೀವು ನಿಮ್ಮ ಉಳಿತಾಯ ಖಾತೆಯಿರುವ ಕರ್ನಾಟಕ ಬ್ಯಾಂಕ್, ನಂಜನಗೂಡು ಶಾಖೆಯ ಚೆಕ್ ನಂಃ316896 ಕ್ಕೆ ರೂ.4,00,000/-ಗಳನ್ನು ದಿನಾಂಕಃ02.08.2024 ಎಂದು ನಮೂದಿಸಿ ಫಿರ್ಯಾದುದಾರರ ಹೆಸರಿಗೆ ನೀಡಿದ್ದು, ತದನಂತರ ಪಿರ್ಯಾದುದಾರರು ಸದರಿ ಚೆಕ್ಕುಗಳನ್ನು ನಗದೀಕರಿಸಿಕೊಳ್ಳಲು ಉಳಿತಾಯ ಖಾತೆಯಿರುವ ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ, ನಂಜನಗೂಡು ಶಾಖೆಯ ಬ್ಯಾಂಕಿನ ಮೂಲಕ ಹಾಜರುಪಡಿಸಿದಾಗ ಸದರಿ ಬ್ಯಾಂಕಿನವರು **"Funds Insufficient"** ಎಂಬ ಹಿಂಬರಹದೊಂದಿಗೆ

ದಿಃ04.11.2024 ರಂದು ನಗಧೀಕೃತಗೊಳ್ಳದೆ ವಾಪಸ್ಸು ಬಂದಿರುವುದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ

**ಪ್ರಶ್ನೆ 4** ಪ್ರಾಸಾ-1 ರವರು ಮುಂದುವರೆದು ಪಿರ್ಯಾದಿ ಪರ ವಕೀಲರ ಮೂಲಕ ದಿಃ20.11.2024 ರಂದು ಕಾನೂನು ರೀತ್ಯಾ ನೋಟಿಸನ್ನು ನೀಡಿದ್ದು, ಸದರಿ ನೋಟೀಸು ದಿಃ 25.11.2024 ರಂದು ಆರೋಪಿಗೆ ಜಾರಿಯಾಗಿದ್ದು, ಆದರೂ ಸಹಾ ಹಣವನ್ನು ಮರುಪಾವತಿ ಮಾಡದೆ ಕಲಂ 138 ನೆಗೋಶಿಯಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಪ್ರಕಾರ ಅಪರಾಧ ಮಾಡಿರುವಿರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ ಃ

**ಪ್ರಶ್ನೆ 5** ನಿಮಗೆ ಇನ್ನೂ ಏನಾದರೂ ಹೇಳುವುದು ಇದೆಯಾ?

ಉತ್ತರ ಃ

**ಪ್ರಶ್ನೆ 6ಃ** ನಿಮ್ಮ ಪರ ಸಾಕ್ಷಿ ವಿಚಾರಣೆ ಮಾಡುವಿರಾ ?

ಉತ್ತರ ಃ

ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕ 19.01.2026 ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ.
ನಂಜನಗೂಡು.